ಆ) ಆ ಪ್ರದೇಶದಲ್ಲಿ ಕನ್ನಡ ಉಳಿವಿಗಾಗಿ ಸಮಗ್ರ ಯೋಜನೆಯನ್ನೇನಾದರು ರೂಪಿಸಲಾಗಿದೆಯೆ?

ಇ) ರೂಪಿಸಿದ್ದಲ್ಲಿ, ಆ ಯೋಜನೆಗಳ ವಿವರಗಳೇನು?

ಶ್ರೀ ಹೆಚ್. ವಿಶ್ವನಾಥ್ (ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು) :

ಅ) ಕನ್ನಡ ಪರ ಕಾರ್ಯಕ್ರಮಗಳನ್ನು ಹೆಚ್ಚಾಗಿ ನಡೆಸಲು ಪ್ರಯತ್ನಿಸಲಾಗುತ್ತಿದೆ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಶಾಸನಬದ್ಧ ಸ್ಥಾನಮಾನಗಳನ್ನು ನೀಡುವುದರ ಬಗ್ಗೆ.

341 - ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಔರಾದ್) : ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಯಾವಾಗ ಅಸ್ತಿತ್ವಕ್ಕೆ ಬಂತು.

ಆ) ಕನ್ನಡ ಪ್ರಾಧಿಕಾರದ ಕೆಲಸಗಳೇನು

ಇ) ಆ ಪ್ರಾದಿಕಾರವು ತೃಪ್ತಿ ತರುವ ರೀತಿಯಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಿಸಿಕೊಂಡು ಬರುತ್ತಿರುವುದು ನಿಜವಲ್ಲವೆ?

ಈ) ಸರ್ಕಾರದ ಆಡಳಿತದ ಎಲ್ಲಾ ಹಂತಗಳಲ್ಲಿ ಕನ್ನಡವನ್ನು ಕಡ್ಡಾಯವಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಶ್ರಮಿಸುತ್ತಿರುವ ಆ ಪ್ರಾಧಿಕಾರಕ್ಕೆ ಶಾಸನಬದ್ಧವಾದ ಸ್ಥಾನಮಾನಗಳನ್ನು ನೀಡಲಾಗಿದೆಯೇ?

ಉ) ಇಲ್ಲವಾದಲ್ಲಿ ಅದನ್ನು ಮುಚ್ಚುವ ಬಗ್ಗೆ ಸರ್ಕಾರ ಪರಿಶೀಲಿಸುತ್ತಿದೆಯೇ?

ಊ) ಇಲ್ಲದಿದ್ದಲ್ಲಿ ಇನ್ನು ಎಷ್ಟು ಸಮಯದಲ್ಲಿ ಅದಕ್ಕೆ ಶಾಸನಬದ್ಧವಾದ ಸ್ಥಾನಮಾನಗಳನ್ನು ನೀಡಲಾಗುವುದು?

ಶ್ರೀ ಹೆಚ್. ವಿಶ್ವನಾಥ್ (ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು.) :

ಅ) ದಿನಾಂಕ 6-2-92 ರಿಂದ

ಆ) ಅನುಬಂಧದಲ್ಲಿ ಕೊಟ್ಟಿದೆ.

ಇ) ನಿಜ.

ಈ) ಇಲ್ಲ

ಉ) ಇಲ್ಲ.

ಊ) ಸದ್ಯದಲ್ಲೇ.

ಅನುಬಂಧ

(1) ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯಗಳು :

(ಎ) ಸರ್ಕಾರದ ಆಡಳಿತ ಭಾಷಾ ನೀತಿಯ ಅನುಷ್ಠಾನದ ಬಗ್ಗೆ ಬೇರೆ ಬೇರೆ ಇಲಾಖೆಗಳು, ಸಾರ್ವಜನಿಕ ಉದ್ದಿಮೆಗಳು, ಎಲ್ಲ ಸಂಸ್ಥೆಗಳು ಮತ್ತು ಸ್ಥಳೀಯ ನಿಕಾಯಗಳು ಮತ್ತು ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಸಂಸ್ಥೆಗಳು ಕೈಗೊಂಡಿರುವ ಕ್ರಮಗಳ ಪರಿಶೀಲನೆ ಮಾಡುವುದು;

(ಬಿ) ಸರ್ಕಾರ ಅಂಗೀಕರಿಸಿರುವ ಡಾ. ಸರೋಜಿನಿ ಮಹಿಷಿ ವರದಿಯ ಶಿಫಾರಸುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಲು ಅಗತ್ಯವಾದ ಕ್ರಮ ಕೈಗೊಳ್ಳುವುದು;

(ಸಿ) ಕನ್ನಡವನ್ನು ಆಡಳಿತ ಭಾಷೆಯನ್ನಾಗಿ ಜಾರಿಗೆ ತರುವಲ್ಲಿ ಇರುವ ಅಡಚಣೆಗಳನ್ನು ಗುರುತಿಸಿ ಅವುಗಳ ನಿವಾರಣೆಗೆ ಸೂಕ್ತ ಕ್ರಮಗಳನ್ನು ಕೈಗೊಳ್ಳುವುದು;

(ಡಿ) ಕನ್ನಡ ಪರೀಕ್ಷೆಗಳ (ಸೇವಾ ಪರೀಕ್ಷೆ) ಪದ್ಧತಿಯನ್ನು, ಕನ್ನಡ ಜ್ಞಾನವನ್ನು ತಿಳಿಯಲು ನಡೆಸಲಾಗುವ ಪರೀಕ್ಷೆಗಳನ್ನು ಈಗಿರುವ ಅಥವಾ ಮುಂದೆ ರೂಪಿಸಬಹುದಾದ ಸಂಬಂಧಪಟ್ಟ ಪಠ್ಯಕ್ರಮಗಳ ಸಹಿತವಾಗಿ ಕಾಲಕಾಲಕ್ಕೆ ಪರಿಶೀಲಿಸುವುದು ಮತ್ತು ಅಗತ್ಯವೆನಿಸಿದರೆ ಇದನ್ನು ಪರಿಷ್ಕರಿಸಲು, ಮಾರ್ಪಡಿಸಲು ಅಥವಾ ನವೀಕರಿಸಲು ರಾಜ್ಯ ಸರ್ಕಾರಕ್ಕೆ ಸಲಹೆ ನೀಡುವುದು, ಕನ್ನಡ ಬೆರಳಚ್ಚುಯಂತ್ರಗಳ ತಯಾರಿಕೆ, ಖರೀದಿ ಮತ್ತು ವಿತರಣೆ ಬಗ್ಗೆ ಕಛೇರಿ ಆಧುನೀಕರಣದಲ್ಲಿ ಬಳಸಲಾಗುವ ಕಂಪ್ಯೂಟರ್, ಟೆಲಿಪ್ರಿಂಟರ್ಸ್, ಟೆಲೆಕ್ಸ್ ಇತ್ಯಾದಿ ಆಧುನಿಕ ಉಪಕರಣಗಳಲ್ಲಿ ಕನ್ನಡವನ್ನು ಬಳಸುವ ಬಗ್ಗೆ ಅಧ್ಯಯನ ಹಾಗೂ ಸಮಾಲೋಚನೆ ನಡೆಸುವುದು ಮತ್ತು ಈ ಸಂಬಂಧದಲ್ಲಿ ಕನ್ನಡವನ್ನೇ ಸಂಪೂರ್ಣವಾಗಿ ಬಳಸುವುದಕ್ಕೆ ಪ್ರೇರಕವಾಗಬಹುದಾದ ನಿರ್ಣಯಗಳನ್ನು ಕೈಗೊಂಡು ಅದನ್ನು ಕಾರ್ಯಗತಗೊಳಿಸುವುದು;

(ಇ) ಅಧಿಕಾರಿಗಳಿಗೆ : ನೌಕರರಿಗೆ ಕನ್ನಡ ಬಳಕೆಗೆ ಅನುಕೂಲವಾದ ತರಬೇತಿ ಕಾರ್ಯಕ್ರಮ, ಶಿಬಿರ, ಪ್ರದರ್ಶನ ಮತ್ತು ವಿಚಾರ ಸಂಕೀರ್ಣಗಳನ್ನು ವಿರ್ಪಡಿಸುವುದು ಮತ್ತು ಕನ್ನಡೇತರರಿಗೆ ಕನ್ನಡ ಕಲಿಕೆ ಕಾರ್ಯಕ್ರಮಗಳನ್ನು ಮತ್ತು ಆ ಸಂಬಂಧ ಪಠ್ಯಕ್ರಮ, ಸಾಹಿತ್ಯ ಸಿದ್ಧಪಡಿಸುವುದು ;

(ಎಫ್) ಕನ್ನಡ ಅಭಿವೃದ್ಧಿಗೆ ಉಪಯುಕ್ತ ಪ್ರಕಟಣೆಗಳನ್ನು ಪ್ರಕಟಿಸುವುದು, ಖರೀದಿಸುವುದು ಮತ್ತು ವಿತರಿಸುವುದು;

(ಜಿ) ಕಛೇರಿಗಳಲ್ಲಿ ಬಳಸಲಾಗುವ ಎಲ್ಲಾ ನಮೂನೆಗಳು ಕನ್ನಡದಲ್ಲಿ ಮುದ್ರಣವಾಗುವಂತೆ ನೋಡಿಕೊಳ್ಳುವುದು ಹಾಗೂ ಕನ್ನಡೇತರ ಭಾಷೆಗಳಲ್ಲಿ ಇರಲೇಬೇಕಾದ ನಮೂನೆ, ಪ್ರಕಟಣೆ ಮತ್ತು ರಿಜಿಸ್ಟರುಗಳನ್ನು ಪರಿಶೀಲಿಸಿ, ಮುದ್ರಣಕ್ಕೆ ಅನುಮತಿ ನೀಡುವುದು;

(ಎಚ್) ರಾಜ್ಯದಲ್ಲಿ ಹೆಚ್ಚು ಜನಸಂಪರ್ಕ ಹೊಂದಿರುವ ಕೇಂದ್ರ ಸರ್ಕಾರದ ಕಛೇರಿಗಳು, ಬ್ಯಾಂಕುಗಳು, ಅಂಚೆಕಛೇರಿಗಳು ಮತ್ತು ಮತ್ತಿತರೆ ಕಛೇರಿಗಳು: ಉದ್ದಿಮೆಗಳಲ್ಲಿ ದೈನಂದಿನ ಬಳಕೆಯಲ್ಲಿರುವ ನಮೂನೆ, ನೋಟೀಸು, ನಾಮಫಲಕಗಳಲ್ಲಿ ಕೇಂದ್ರ ಸರ್ಕಾರದ ಭಾಷಾ ನೀತಿಗೆ ಅನುಗುಣವಾಗಿ ಪ್ರಾದೇಶಿಕ ಭಾಷೆಯನ್ನು ಬಳಸಲಾಗುತ್ತಿದೆಯೇ ಎಂಬುದನ್ನು ಪರಿಶೀಲಿಸುವುದು ಮತ್ತು ಈ ಸಂಬಂಧ ಅಂಥ ಕಛೇರಿಗಳೊಂದಿಗೆ ಪತ್ರವ್ಯವಹಾರ ಕೈಗೊಳ್ಳುವುದು;

(ಐ) ಆಡಳಿತ ಪೂರಕ ಸಾಹಿತ್ಯ ರಚನೆ , ಪರಿಷ್ಕರಣೆ, ಮುದ್ರಣ ಮತ್ತು ವಿತರಣೆ ವಿಷಯಗಳಲ್ಲಿ ತೀರ್ಮಾನ ಕೈಗೊಳ್ಳುವುದು ಮತ್ತು ಈ ಕ್ಷೇತ್ರದಲ್ಲಿನ ಪ್ರಗತಿಯನ್ನು ಆಗಿಂದಾಗ್ಗೆ ಸಮೀಕ್ಷಿಸಿ ಸೂಕ್ತ ಕ್ರಮ ಸೂಚಿಸುವುದು.

ಮೋಟಾರು ವಾಹನ ಸಾರಿಗೆ ಇಲಾಖೆಯಿಂದ ತೆರಿಗೆ ಸಂಗ್ರಹಣೆ ವಿವರ.

322 - ಶ್ರೀ ಪಿ. ಬಸವರಾಜ (ಬ್ರಹ್ಮಾವರ): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿರುವ ಮೋಟಾರು ವಾಹನ ಸಾರಿಗೆ ಉಪಸಾರಿಗೆ ಅಧಿಕಾರಿಗಳವರ ಕಛೇರಿಗಳು ಎಷ್ಟು; ಹಾಗೂ ಈ ಕಛೇರಿಗಳು ಮೋಟಾರು ವಾಹನ ತೆರಿಗೆ ಸಂಗ್ರಹದ ನಿಗದಿತ ಗುರಿಯಲ್ಲಿ ಎಷ್ಟು ಪ್ರತಿಶತ ಮೋಟಾರು ವಾಹನ ತೆರಿಗೆಯನ್ನು ಸಂಗ್ರಹಿಸಿರುತ್ತದೆ. (ಜಿಲ್ಲಾವಾರು ವಿವರ ನೀಡುವುದು.)*